ದೂರವಾಣಿ : 080 - 22263479

ಬೆಂ.ಮ.ಪ್ರ.ಪ್ರಾ.

# ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರ

ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ನಂ. 1, ಆಲಿ ಆಸ್ಕರ್ ರಸ್ತೆ, ಬೆಂಗಳೂರು – 560 052.

ಸಂಖ್ಯೆ: **STRRPA/TP/LAO/40/2023-24/25-26** ದಿನಾಂಕ: 29.04.2025.

**"ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನಾ ಪತ್ರ"**

**ವಿಷಯ:** ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಬಿದಲೂರು ಗ್ರಾಮದ (ಹಳೇ ಸ.ನಂ. 122) ಸ.ನಂ.254ರಲ್ಲಿ 2–00ಎಕರೆ, 255ರಲ್ಲಿ 2–00ಎಕರೆ, 256ರ ಪೈಕಿ 1ಎಕರೆ–37½ಗುಂಟೆ, 258ರಲ್ಲಿ 2–00ಎಕರೆ, 260ರಲ್ಲಿ 2–00ಎಕರೆ, 261ರಲ್ಲಿ 1ಎಕರೆ–37½ಗುಂಟೆ, 262ರ ಪೈಕಿ 1ಎಕರೆ–38ಗುಂಟೆ, 263ರಲ್ಲಿ 2–00ಎಕರೆ, 264ರಲ್ಲಿ 1ಎಕರೆ–21ಗುಂಟೆ, 265ರಲ್ಲಿ 2–00ಎಕರೆ, 266ರ ಪೈಕಿ 1ಎಕರೆ–33ಗುಂಟೆ ಒಟ್ಟು 21ಎಕರೆ–07ಗುಂಟೆ ಪೈಕಿ ಸ್ಥಳದಲ್ಲಿ ಲಭ್ಯವಿರುವ 21ಎಕರೆ–0¾ಗುಂಟೆ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡುವ ಬಗ್ಗೆ.

**ಉಲ್ಲೇಖ:**
1. ಅರ್ಜಿದಾರರ ದಿನಾಂಕ: 02.02.2024ರ ಅರ್ಜಿ.
2. ದಿನಾಂಕ: 03.03.2025ರಂದು ನಡೆದ ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರದ 40ನೇ ಸಭೆಯ ವಿಷಯ ಸಂಖ್ಯೆ: 40.13.5ರ ನಡವಳಿಕೆ.
3. ಈ ಕಛೇರಿ ಸಮಸಂಖ್ಯೆ ಪತ್ರ ದಿನಾಂಕ: 27.02.2025.
4. ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಪತ್ರ ಸಂಖ್ಯೆ: BMRDA/STRRPA/LAO/01/2024-25 ದಿನಾಂಕ: 13.03.2025
5. ಶುಲ್ಕ ಪಾವತಿ ರಸೀದಿ ಸಂಖ್ಯೆ: 5915 ಮತ್ತು 5916, ದಿನಾಂಕ: 24.04.2025.
6. ಉಪನಗರ ವರ್ತುಲ ರಸ್ತೆ ಭೂಬ್ಯಾಂಕ್ ಮತ್ತು ನಾಗರೀಕ ಸೌಕರ್ಯಕ್ಕಾಗಿ ಕಾಯ್ದಿರಿಸಿದ ಜಾಗಗಳ ಪರಿತ್ಯಜನಾ ಪತ್ರ ಸಂಖ್ಯೆ: DNH-1-00983-2025–26 ದಿನಾಂಕ: 22.04.2025.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರಲ್ಲಿನ ಅರ್ಜಿಯಲ್ಲಿ ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಬಿದಲೂರು ಗ್ರಾಮದ (ಹಳೇ ಸ.ನಂ.122) ಸ.ನಂ.254ರಲ್ಲಿ 2–00ಎಕರೆ, 255ರಲ್ಲಿ 2–00ಎಕರೆ, 256ರ ಪೈಕಿ 1ಎಕರೆ–37½ಗುಂಟೆ, 258ರಲ್ಲಿ 2–00ಎಕರೆ, 260ರಲ್ಲಿ 2–00ಎಕರೆ, 261ರಲ್ಲಿ 1ಎಕರೆ–37½ಗುಂಟೆ, 262ರ ಪೈಕಿ 1ಎಕರೆ–38ಗುಂಟೆ, 263ರಲ್ಲಿ 2–00ಎಕರೆ, 264ರಲ್ಲಿ 1ಎಕರೆ–21ಗುಂಟೆ, 265ರಲ್ಲಿ 2–00ಎಕರೆ, 266ರ ಪೈಕಿ 1ಎಕರೆ–33ಗುಂಟೆ ಒಟ್ಟು 21ಎಕರೆ–07ಗುಂಟೆ ಪೈಕಿ ಸ್ಥಳದಲ್ಲಿ ಲಭ್ಯವಿರುವ 21ಎಕರೆ–0¾ಗುಂಟೆ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ವಿನ್ಯಾಸ ನಕ್ಷೆ ಅನುಮೋದನೆ ನೀಡಲು ಕೋರಲಾಗಿತ್ತು. ಉಲ್ಲೇಖ (2)ರಲ್ಲಿ ನಮೂದಿಸಿರುವ ದಿನಾಂಕ: 03.03.2025ರಂದು ನಡೆದ ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರದ 40ನೇ ಸಭೆಯ ವಿಷಯ ಸಂಖ್ಯೆ: 40.13.5ರ ನಡವಳಿಕೆಯಲ್ಲಿ ವಾಣಿಜ್ಯ ಉದ್ದೇಶಕ್ಕೆ ಭೂಪರಿವರ್ತನೆಯಾಗಿರುವ ಜಮೀನುಗಳಿಗೆ ವಸತಿ ವಿನ್ಯಾಸ ನಕ್ಷೆ ಅನುಮೋದನೆಗೆ ಪರಿಗಣಿಸಬಹುದೇ ಎಂಬ ಬಗ್ಗೆ ಸೂಕ್ತ ಮಾರ್ಗದರ್ಶನ ನೀಡಲು ಕೋರಿ ದಿನಾಂಕ: 27.02.2025ರ ಈ ಕಛೇರಿಯ ಪತ್ರದಲ್ಲಿ

..2

b
29/04/25

ಪ್ರಸ್ತಾವನೆಯನ್ನು ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಲಾಗಿದ್ದು, ಸದರಿಯವರಿಂದ ಅಭಿಪ್ರಾಯ ಪಡೆದು, ಸದರಿ ವಸತಿ ವಿನ್ಯಾಸದಲ್ಲಿನ ಉಪನಗರ ವರ್ತುಲ ರಸ್ತೆ ಭೂಬ್ಯಾಂಕ್ ಹಾಗೂ ನಾಗರೀಕ ಸೌಕರ್ಯ ನಿವೇಶನಕ್ಕಾಗಿ ಕಾಯ್ದಿರಿಸಿರುವ ಪ್ರದೇಶಗಳನ್ನು ನೊಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಹಸ್ತಾಂತರಿಸಿಕೊಂಡು, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಬಿದಲೂರು ಗ್ರಾಮದ ಸ.ನಂ.254ರಲ್ಲಿ 2-00ಎಕರೆ, 255ರಲ್ಲಿ 2-00ಎಕರೆ, 256ರ ಪೈಕಿ 1ಎಕರೆ-37½ಗುಂಟೆ, 258ರಲ್ಲಿ2-00ಎಕರೆ, 260ರಲ್ಲಿ 2-00ಎಕರೆ, 261ರಲ್ಲಿ 1ಎಕರೆ-37½ಗುಂಟೆ, 262ರ ಪೈಕಿ 1ಎಕರೆ-38ಗುಂಟೆ, 263ರಲ್ಲಿ 2-00ಎಕರೆ, 264ರಲ್ಲಿ 1ಎಕರೆ-21ಗುಂಟೆ, 265ರಲ್ಲಿ 2-00ಎಕರೆ, 266ರ ಪೈಕಿ 1ಎಕರೆ-33ಗುಂಟೆ ಒಟ್ಟು 21ಎಕರೆ-07ಗುಂಟೆ ಪೈಕಿ ಸ್ಥಳದಲ್ಲಿ ಲಭ್ಯವಿರುವ 21ಎಕರೆ-0¾ಗುಂಟೆ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ವಿನ್ಯಾಸ ನಕ್ಷೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ17(2ಎ) ರಡಿಯಲ್ಲಿ ತಾತ್ಕಾಲಿಕ ಅನುಮೋದನೆ ನೀಡಲು ತೀರ್ಮಾನಿಸಲಾಗಿರುತ್ತದೆ.

ಪ್ರಸ್ತುತ ಸದರಿ ಪ್ರದೇಶಗಳು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಮಹಾಯೋಜನೆಯಲ್ಲಿ ವ್ಯವಸಾಯ ವಲಯದಲ್ಲಿದ್ದು, ಅನುಮೋದಿತ ವಲಯ ನಿಯಮಾವಳಿ ಪ್ರಕಾರ ದಿನಾಂಕ: 17.10.2024ರ ಪೂರ್ವದಲ್ಲಿ ಭೂಪರಿವರ್ತನೆಯಾಗಿರುವ ಪ್ರಕರಣಗಳನ್ನು ಪರಿಗಣಿಸಲು ಅವಕಾಶವಿರುತ್ತದೆ. ಪ್ರಸ್ತುತ ಪ್ರದೇಶದಲ್ಲಿ ಭಾಗಶಃ ಪ್ರದೇಶವು ವಸತಿ ಉದ್ದೇಶಕ್ಕಾಗಿ ಹಾಗೂ ಭಾಗಶಃ ಪ್ರದೇಶವು ವಾಣಿಜ್ಯ ಉದ್ದೇಶಕ್ಕಾಗಿ ಭೂಪರಿವರ್ತನೆಗೊಂಡಿರುವುದರಿಂದ ಹಾಗೂ ವಲಯ ನಿಯಮಾವಳಿಗಳ ಪ್ರಕಾರ ವಾಣಿಜ್ಯ ವಲಯದಲ್ಲಿ ವಸತಿ ಉದ್ದೇಶಕ್ಕಾಗಿ ಅನುಮತಿ ನೀಡಲು ಅವಕಾಶವಿರುವುದರಿಂದ ಹಾಗೂ ದಿನಾಂಕ: 14.02.2025ರಲ್ಲಿ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಅರ್ಜಿದಾರರು ಸಲ್ಲಿಸಿರುವ ಭೂಪರಿವರ್ತನೆ ಆದೇಶವು ನೈಜತೆಯಿಂದ ಕೂಡಿರುತ್ತದೆ ಎಂದು ದೃಢೀಕರಿಸಿ ಸಲ್ಲಿಸಿರುವುದರಿಂದ ಹಾಗೂ ಭೂಪರಿವರ್ತನೆ ಆದೇಶವನ್ನು ಪರಿಗಣಿಸಬಹುದಾಗಿದೆ ಎಂದು ತಿಳಿಸಿರುವುರಿಂದ, ಅರ್ಜಿದಾರರು ಸಲ್ಲಿಸಿರುವ ವಸತಿ ವಿನ್ಯಾಸ ನಕ್ಷೆಗೆ ನಿಯಮಾವಳಿಗಳ ಪ್ರಕಾರ ತಾತ್ಕಾಲಿಕ ಅನುಮೋದನೆ ನೀಡಲು ಪರಿಗಣಿಸಬಹುದಾಗಿದ್ದು, ಭೂದಾಖಲೆಗಳ ಸಹಾಯಕ ನಿರ್ದೇಶಕರು ದೃಢೀಕರಿಸಿದ ಸರ್ವೆ ನಕ್ಷೆಯನ್ನು ಲಗತ್ತಿಸಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆಗೆ ಪರಿಗಣಿಸುವ ಬಗ್ಗೆ ಸೂಕ್ತ ಮಾರ್ಗದರ್ಶನ ನೀಡಲು ಉಲ್ಲೇಖ (3)ರ ಈ ಕಛೇರಿ ಪತ್ರದಲ್ಲಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರಿಗೆ ಸಲ್ಲಿಸಲಾಗಿತ್ತು.

ಅದರಂತೆ ಉಲ್ಲೇಖ (4)ರ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಪತ್ರದಲ್ಲಿ ವಿನ್ಯಾಸ ಅನುಮೋದನೆ ಕೋರಿರುವ ಜಮೀನುಗಳು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಮಹಾಯೋಜನೆಯಲ್ಲಿ ವ್ಯವಸಾಯ ವಲಯದಲ್ಲಿದ್ದು, ಅನುಮೋದಿತ ವಲಯ ನಿಯಮಾವಳಿ ಪ್ರಕಾರ ದಿನಾಂಕ: 17.10.2024ರ ಪೂರ್ವದಲ್ಲಿ ಭೂಪರಿವರ್ತನೆಯಾಗಿರುವ ಪ್ರಕರಣಗಳನ್ನು ಪರಿಗಣಿಸಲು ಅವಕಾಶವಿರುತ್ತದೆ. ಪ್ರಸ್ತಾಪಿತ ಜಮೀನುಗಳ ಪ್ರದೇಶದಲ್ಲಿ ಭಾಗಶಃ ಪ್ರದೇಶವು ವಸತಿ ಉದ್ದೇಶಕ್ಕಾಗಿ ಹಾಗೂ ಭಾಗಶಃ ಪ್ರದೇಶವು ವಾಣಿಜ್ಯ ಉದ್ದೇಶಕ್ಕಾಗಿ ಈಗಾಗಲೇ ಭೂಪರಿವರ್ತನೆಗೊಂಡಿದ್ದು, ನೈಜತೆಯಂತೆ ಊರ್ಜಿತವಾಗಿರುವುದರಿಂದ ಹಾಗೂ ವಲಯ ನಿಯಮಾವಳಿಗಳ ಪ್ರಕಾರ ವಾಣಿಜ್ಯ ವಲಯದಲ್ಲಿ ವಸತಿ ಉದ್ದೇಶಕ್ಕಾಗಿ ಅನುಮತಿ ನೀಡಲು ಅವಕಾಶವಿರುತ್ತದೆ ಎಂದು ತಿಳಿಸಿರುತ್ತಾರೆ.

..3

29/04/25

Housiey.com

ಸದರಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆಗೆ ಸಂಬಂಧಿಸಿದಂತೆ ಅಗತ್ಯ ಪರಿಶೀಲನಾ ಶುಲ್ಕ, ನಕ್ಷೆ ಶುಲ್ಕ, ಉತ್ತಮತೆ ಶುಲ್ಕ, ಕೆರೆ ಸಂರಕ್ಷಣಾ ಶುಲ್ಕ ಮತ್ತು ಸೆಸ್‌ಗಳನ್ನು ಅರ್ಜಿದಾರರು ಉಲ್ಲೇಖ (5)ರಲ್ಲಿ ಈ ಪ್ರಾಧಿಕಾರಕ್ಕೆ ಪಾವತಿಸಲಾಗಿರುತ್ತದೆ.

ಉಲ್ಲೇಖ (6)ರಂತೆ ಸದರಿ ವಸತಿ ವಿನ್ಯಾಸ ನಕ್ಷೆಯಲ್ಲಿ ಕಾಯ್ದಿರಿಸಲಾದ ಉಪನಗರ ವರ್ತುಲ ರಸ್ತೆ ಭೂಬ್ಯಾಂಕ್ ಮತ್ತು ನಾಗರೀಕ ಸೌಲಭ್ಯ ಉದ್ದೇಶಕ್ಕಾಗಿ ಕಾಯ್ದಿರಿಸಲಾದ ಪ್ರದೇಶಗಳನ್ನು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಈ ಪ್ರಾಧಿಕಾರಕ್ಕೆ ಹಸ್ತಾಂತರಿಸಿರುತ್ತಾರೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17(2ಎ)ರ ಅಡಿಯಲ್ಲಿ ಸದರಿ ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಬಿದಲೂರು ಗ್ರಾಮದ (ಹಳೇ ಸ.ನಂ.122) ಸ.ನಂ.254ರಲ್ಲಿ 2–00ಎಕರೆ, 255ರಲ್ಲಿ 2–00ಎಕರೆ, 256ರ ಪೈಕಿ 1ಎಕರೆ–37½ಗುಂಟೆ, 258ರಲ್ಲಿ 2–00ಎಕರೆ, 260ರಲ್ಲಿ 2–00ಎಕರೆ, 261ರಲ್ಲಿ 1ಎಕರೆ–37½ಗುಂಟೆ, 262ರ ಪೈಕಿ 1ಎಕರೆ–38ಗುಂಟೆ, 263ರಲ್ಲಿ 2–00ಎಕರೆ, 264ರಲ್ಲಿ 1ಎಕರೆ–21ಗುಂಟೆ, 265ರಲ್ಲಿ 2–00ಎಕರೆ, 266ರ ಪೈಕಿ 1ಎಕರೆ–33ಗುಂಟೆ ಒಟ್ಟು 21ಎಕರೆ–07ಗುಂಟೆ ಪೈಕಿ ಸ್ಥಳದಲ್ಲಿ ಲಭ್ಯವಿರುವ 21ಎಕರೆ–0¾ಗುಂಟೆ ವಿಸ್ತೀರ್ಣ ಪ್ರದೇಶದಲ್ಲಿ ಮಟ್ಟ ಮಾಡುವುದು, ನೆಲಗಟ್ಟು ಹಾಸುವುದು, ಜಲ್ಲಿಕಲ್ಲನ್ನು ಹಾಸುವುದು, ಕಲ್ಲು ಚಪ್ಪಡಿ ಹಾಕುವುದು, ನಾಲೆಗಳ ನಿರ್ಮಾಣ, ಚರಂಡಿಗಳ ನಿರ್ಮಾಣ, ಮೋರಿಗಳ ನಿರ್ಮಾಣ, ಬೀದಿದೀಪದ ವ್ಯವಸ್ಥೆ ಮತ್ತು ನೀರು ಸರಬರಾಜಿಗೆ ಮಾಡಬೇಕಾದ ವ್ಯವಸ್ಥೆಯನ್ನೊಳಗೊಂಡಂತೆ ನಿವೇಶನಗಳು, ರಸ್ತೆ ಪಂಕ್ತೀಕರಣ, ಉದ್ಯಾನವನ ಮತ್ತು ನಾಗರೀಕ ಸೌಲಭ್ಯ ಪ್ರದೇಶ ಮತ್ತು ಯಾವುದೇ ಇತರ ಮೂಲ ಸೌಕರ್ಯವನ್ನು ತೋರಿಸಿ, ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಉದ್ದೇಶಗಳಿಗಾಗಿ ಮಾತ್ರ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲಾಗಿದೆ.

**ಷರತ್ತುಗಳು**

1) ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ 02 ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಸತಿ ವಿನ್ಯಾಸ ಅಭಿವೃದ್ಧಿ ಕಾರ್ಯ ಪೂರ್ಣಗೊಳಿಸದಿದ್ದಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮತಿಯನ್ನು ನವೀಕರಿಸಿಕೊಳ್ಳತಕ್ಕದ್ದು.
2) ಪ್ರಾಧಿಕಾರಕ್ಕೆ ಸಮಾಧಾನವಾಗುವಂತೆ ಮಟ್ಟ ಮಾಡುವುದು, ನೆಲಗಟ್ಟು ಹಾಸುವುದು, ಜಲ್ಲಿಕಲ್ಲನ್ನು ಹಾಸುವುದು, ಕಲ್ಲು ಚಪ್ಪಡಿ ಹಾಕುವುದು, ನಾಲೆಗಳ ನಿರ್ಮಾಣ, ಚರಂಡಿಗಳ ನಿರ್ಮಾಣ, ಮೋರಿಗಳ ನಿರ್ಮಾಣ, ಬೀದಿದೀಪದ ವ್ಯವಸ್ಥೆ ಮತ್ತು ನೀರು ಸರಬರಾಜಿಗೆ ಮಾಡಬೇಕಾದ ವ್ಯವಸ್ಥೆಯನ್ನೊಳಗೊಂಡಂತೆ ನಿವೇಶನಗಳು, ರಸ್ತೆ ಪಂಕ್ತೀಕರಣ, ಉದ್ಯಾನ ಮತ್ತು ನಾಗರೀಕ ಸೌಲಭ್ಯ ಪ್ರದೇಶ ಮತ್ತು ಯಾವುದೇ ಇತರ ಮೂಲ ಸೌಕರ್ಯವನ್ನು ತೋರಿಸಿ, ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಉದ್ದೇಶಗಳಿಗಾಗಿ ನಿಯಮಿತವಾದಂತೆ ನಿಯಮಗಳಿಗೆ ಅನುಸಾರವಾಗಿ ತಾತ್ಕಾಲಿಕ ಬಡಾವಣೆ ನಕ್ಷೆಗೆ ಮಂಜೂರಾತಿಯನ್ನು ನೀಡಲಾಗಿದೆ.
3) ತಾತ್ಕಾಲಿಕ ಅನುಮೋದನೆ ಆಗಿರುವ ವಸತಿ ವಿನ್ಯಾಸ ನಕ್ಷೆಯ ರೀತ್ಯ ಮಾಲೀಕನು ಯಾವುದೇ ಪರಿಹಾರವನ್ನು ಕ್ಲೇಮು ಮಾಡದೆಯೇ ಉಚಿತವಾಗಿ ನೋಂದಾಯಿತ ಪರಿತ್ಯಜನಾ ಪತ್ರದ ಮುಖಾಂತರ ಸಂಬಂಧಿಸಿದ ಸ್ಥಳೀಯ ಸಂಸ್ಥೆಗೆ ಸಾರ್ವಜನಿಕ ಉಪಯೋಗದ ರಸ್ತೆಗಳನ್ನು, ಉದ್ಯಾನಗಳನ್ನು ಹಸ್ತಾಂತರಿಸತಕ್ಕದ್ದು.
4) ಸಂಬಂಧಪಟ್ಟ ಪ್ರಾಧಿಕಾರದ/ಮಂಡಳಿ/ಇಲಾಖೆಯ ಮೇಲ್ವಿಚಾರಣೆಯ ಅಡಿಯಲ್ಲಿ, ಮೇಲೆ ಹೇಳಲಾದ ಎಲ್ಲಾ ಮೂಲ ಸೌಕರ್ಯಗಳನ್ನು ಒಳಗೊಂಡ ಎಲ್ಲ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿರುವುದನ್ನು ಖಚಿತಪಡಿಸಿಕೊಳ್ಳಲು ಮತ್ತು ಎಲ್ಲ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದಕ್ಕಾಗಿ ಸಂಬಂಧಪಟ್ಟ ಪ್ರಾಧಿಕಾರ/ಮಂಡಳಿ/ ಇಲಾಖೆಯಿಂದ ಕಾರ್ಯಪೂರ್ತಿ ಪ್ರಮಾಣ ಪತ್ರವನ್ನು ಪಡೆದು ಮತ್ತು ಸ್ಥಳೀಯ ಸಂಸ್ಥೆಗೆ ರಸ್ತೆಗಳು, ಉದ್ಯಾನಗಳನ್ನು ಬಿಟ್ಟುಕೊಟ್ಟ ಬಗ್ಗೆ ದಾಖಲೆಗಳನ್ನು ಸಲ್ಲಿಸತಕ್ಕದ್ದು.
5) ಅನುಮೋದಿತ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯ ರೀತ್ಯ ಅನುಮೋದನೆ ನೀಡಿದ 02 ವರ್ಷಗಳೊಳಗಾಗಿ ಸಂಪೂರ್ಣವಾಗಿ ಉದ್ಯಾನವನ, ನಾಗರೀಕ ಸೌಲಭ್ಯಕ್ಕೆ ಮೀಸಲಿಟ್ಟ ಜಾಗ, ರಸ್ತೆಗಳು, ಒಳಚರಂಡಿ ವ್ಯವಸ್ಥೆ, ನೀರಿನ ಸೌಕರ್ಯ, ವಿದ್ಯುತ್ ಸಂಪರ್ಕಗಳನ್ನು ಅಭಿವೃದ್ಧಿಪಡಿಸತಕ್ಕದ್ದು.

..4

29/04/25

6) ವಸತಿ ವಿನ್ಯಾಸದ ಗಡಿ ನಿರ್ಧಾರ ಮತ್ತು ಅಭಿವೃದ್ಧಿಪಡಿಸುವ ಉದ್ದೇಶಕ್ಕಾಗಿ ನಕ್ಷೆಯನ್ನು ಬಿಡುಗಡೆ ಮಾಡಲಾಗಿದ್ದು, ವಿನ್ಯಾಸದಲ್ಲಿನ ನಿವೇಶಗಳನ್ನು ಪರಭಾರೆ ಮಾಡುವುದಾಗಲೀ ಮತ್ತು ಖಾತೆ ತೆರೆಯುವುದಾಗಲೀ ಮಾಡತಕ್ಕದ್ದಲ್ಲ. ನಿವೇಶನಗಳಲ್ಲಿರುವ ಕಟ್ಟಡಗಳಿಗೆ ಪ್ರಾರಂಭ ಪ್ರಮಾಣ ಪತ್ರವನ್ನು ಅಥವಾ ಲೈಸೆನ್ಸನ್ನು ಮಂಜೂರು ಮಾಡತಕ್ಕದ್ದಲ್ಲ ಅಥವಾ ನೀಡತಕ್ಕದ್ದಲ್ಲ.

7) ಪ್ರಶ್ನಿತ ಜಮೀನಿನಲ್ಲಿ ಸರ್ಕಾರಿ ಖರಾಬು ಜಾಗವನ್ನು ಯಥಾವತ್ತಾಗಿ ಕಾಯ್ದಿರಿಸತಕ್ಕದ್ದು ಹಾಗೂ ಈ ಜಾಗವನ್ನು ಒತ್ತುವರಿ ಮಾಡುವುದು ಅಥವಾ ಇತರೆ ಯಾವುದೇ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

8) ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಸರ್ಕಾರದ ಅಥವಾ ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದು ಬಂದಲ್ಲಿ ಅಂತಹ ಸಂದರ್ಭದಲ್ಲಿ ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ.

9) ಈ ಅನುಮೋದನೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17 ರಡಿಯಲ್ಲಿ ನೀಡುತ್ತಿರುವುದರಿಂದ ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸತಕ್ಕದ್ದಲ್ಲ.

10) ಸದರಿ ನಿವೇಶನದಲ್ಲಿ ಕಡ್ಡಾಯವಾಗಿ ಯಾವುದೇ ಉಪವಿಭಜನೆ ಮಾಡಿ ಮಾರಾಟ ಮಾಡತಕ್ಕದ್ದಲ್ಲ, ಒಂದು ವೇಳೆ ಯಾವುದೇ ಬದಲಾವಣೆಯ ಅವಶ್ಯಕತೆ ಇದ್ದಲ್ಲಿ ಪ್ರಾಧಿಕಾರದಿಂದ ಅನುಮತಿ ಪಡೆಯತಕ್ಕದ್ದು. ಈ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಯನ್ನು ಮಾಡಬಾರದು.

11) ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು.

12) ಸದರಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ರಸ್ತೆ, ರಸ್ತೆ ಬದಿಚರಂಡಿ, ಕಲವರ್ಟ್‌ಗಳು, ಪಾದಚಾರಿ ಮಾರ್ಗ ಇತ್ಯಾದಿ ಸಿವಿಲ್ ಕಾಮಗಾರಿಗಳನ್ನು ಸಂಬಂಧಿತ ಲೋಕೋಪಯೋಗಿ ಇಲಾಖೆ/ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ/ನಗರ ಸ್ಥಳೀಯ ಸಂಸ್ಥೆಯ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ, ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.

13) ಸದರಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಕಾಮಗಾರಿಗಳನ್ನು ಸಂಬಂಧಿತ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.

14) ಸದರಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ವಿದ್ಯುದ್ಧಿಕರಣೆ ಕಾಮಗಾರಿಗಳನ್ನು ಸಂಬಂಧಿತ ಬೆಸ್ಕಾಂ ಮಂಡಳಿ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.

15) ಪ್ರಸ್ತಾಪಿತ ವಿನ್ಯಾಸದಲ್ಲಿ ಘನ ತ್ಯಾಜ್ಯಗಳನ್ನು ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು.

16) ಅಭಿವೃದ್ಧಿದಾರರು ಕೊಳಚೆ ನೀರನ್ನು ಬಯಲು ಜಾಗ/ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಅನ್ಯ ಉದ್ದೇಶಗಳಿಗೆ ಬಳಕೆ ಮಾಡತಕ್ಕದ್ದು.

17) ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡು ಕಡೆ ಗಿಡ/ಮರಗಳನ್ನು ಬೆಳೆಸುವುದು.

18) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ಕಟ್ಟಡಗಳಲ್ಲಿ ಮಳೆ ನೀರು ಸಂಗ್ರಹಣೆಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ವಿನ್ಯಾಸದಲ್ಲಿ ಅಂತರ್ಜಲ ವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

19) ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ-ಪಕ್ಕದ ಜಮೀನುಗಳಿಗೆ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.

20) ಸದರಿ ಜಮೀನುಗಳಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.

..5

29/04/25

21) ತಾತ್ಕಾಲಿಕ ವಸತಿ ವಿನ್ಯಾಸ ಅನುಮೋದನೆ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ವಸತಿ ವಿನ್ಯಾಸಕ್ಕೆ ನೀಡಿರುವ ತಾತ್ಕಾಲಿಕ ಅನುಮೋದನೆ ತಂತಾನೇ ಸ್ವಯಂಚಾಲಿತವಾಗಿ ರದ್ದಾಗುತ್ತದೆ.

22) ಮೇಲಿನಂತೆ ನೀಡಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.

23) ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 209 ಬಿಎಂಆರ್ 2016, ದಿನಾಂಕ: 31.03.2017 ರ ರೀತ್ಯ ಪತ್ರಿಕೆ, ಮಾಧ್ಯಮ, ಜಾಹೀರಾತು ಪ್ರಕಟಣೆಗಳಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವಂತಿಲ್ಲ. ತಪ್ಪು ಮಾಹಿತಿ ಪ್ರಕಟಿಸದೇ ಅನುಮೋದನೆ ಪಡೆದುಕೊಂಡಿರುವ ಯೋಜನಾ ಪ್ರಾಧಿಕಾರದ ಹೆಸರನ್ನು ಮಾತ್ರ ನಮೂದಿಸತಕ್ಕದ್ದು.

24) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ರಚಿಸಿರುವ Direction under section 18(1)(b) of Water (Prevention & Control of Pollution) Act, 1974ರ ಕಾಯ್ದೆಯಲ್ಲಿ ರೂಪಿಸಿರುವ ನಿಯಮದಂತೆ ಕ್ರಮ ಕೈಗೊಳ್ಳಲು ಸೂಚಿರುವಂತೆ ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.

   i.ಮಳೆ ನೀರು ಗಾಲುವೆಯನ್ನು ಮುಚ್ಚದಂತೆ ಕ್ರಮವಹಿಸುವುದು.

   ii. ಮಳೆ ನೀರು ಗಾಲುವೆಗಳಿಗೆ ಯಾವುದೇ ಕೊಳಚೆ ನೀರು ಹಾಗೂ ಇನ್ನಿತರೆ ತ್ಯಾಜ್ಯ ವಸ್ತುಗಳು ಸೇರ್ಪಡೆಯಾಗದಂತೆ ಕ್ರಮವಹಿಸುವುದು.

   iii. ಕಂದಾಯ ಇಲಾಖೆಯ ದಾಖಲೆಗಳಂತೆ ಇರುವ ಮಳೆ ನೀರು ಗಾಲುವೆಗಳ ಅಳತೆಗಳನ್ನು ಅತಿಕ್ರಮ/ಒತ್ತುವರಿ ಆಗದಂತೆ ಯಥಾವತ್ತಾಗಿ ಕಾಯ್ದಿರಿಸಿಕೊಂಡು ಸರಾಗವಾಗಿ ನೀರು ಹರಿಯಲು ಬೇಕಾದ ಕ್ರಮವಹಿಸುವುದು.

   iv. ಮಳೆ ನೀರು ಗಾಲುವೆಗಳು ತೆರೆದ ಸ್ಥಿತಿಯಲ್ಲಿ ಸ್ವಚ್ಛವಾಗಿರುವಂತೆ ಕ್ರಮವಹಿಸುವುದು.

25) ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ಅನುಮೋದಿತ ವಿನ್ಯಾಸ/ ಬಡಾವಣೆಯನ್ನು ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳತಕ್ಕದ್ದು ಹಾಗೂ ನೋಂದಣಿ ಮಾಡಿಕೊಂಡ ನಂತರವೇ ಬಡಾವಣೆಯ ನಿರ್ಮಾಣದ ಕುರಿತು/ ನಿವೇಶನ ಹಂಚಿಕೆ ಕುರಿತು ಜಾಹೀರಾತು ನೀಡುವುದು.

26) ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಪ್ರಾಧಿಕಾರವು ವಿಧಿಸಿರುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.

**ಲಗತ್ತು:** ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಕಾರ್ಯಕೈಗೊಳ್ಳಲು ಮಾತ್ರ ನೀಡಲಾಗಿರುವ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ.

29/04/25

**ಸದಸ್ಯ ಕಾರ್ಯದರ್ಶಿಗಳ ಪರವಾಗಿ**
ನಗರ ಮತ್ತು ಗ್ರಾಮಾಂತರ ಯೋಜನಾ
ಜಂಟಿ ನಿರ್ದೇಶಕರು,
ಉಪನಗರ ವರ್ತುಲ ರಸ್ತೆ (STRR) ಯೋಜನಾ
ಪ್ರಾಧಿಕಾರ, ಬೆಂಗಳೂರು.

**ಟಿಪ್ಪಣಿ ಸದಸ್ಯ ಕಾರ್ಯದರ್ಶಿಯವರಿಂದ ಅನುಮೋದಿಸಲ್ಪಟ್ಟಿದೆ**

**ಇವರಿಗೆ,**
ಮೆ॥ ರಿಯಾ ಪ್ರಾಪರ್ಟೀಸ್ ಪ್ರೈವೇಟ್ ಲಿಮಿಟೆಡ್
ಇದರ ಅಧಿಕೃತ ಸಹಿದಾರರಾದ
ಶ್ರೀ ಸಂಜಯ್ ಬಿನ್ ಶ್ರೀ ಲೇಟ್ ಚಂದ್ರಶೇಖರಯ್ಯ,
#111, ವೀನಸ್ ಅಪಾರ್ಟ್‌ಮೆಂಟ್ಸ್, ಕುಪ್ಪೆ ಪ್ಯಾರೇಡ್,
ಮುಂಬಯಿ–400 005.